**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3362/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ01**

**ದಿನಾಂಕಃ 15.11.2025** **ಸಿಡಬ್ಲ್ಯೂ01**

| | |
|---|---|
| ಹೆಸರು | ಕೆಂಚಪ್ಪ |
| ತಂದೆ ಹೆಸರು | ಹನುಮಂತಪ್ಪ |
| ವಯಸ್ಸು | 42 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಕೊಕ್ಕನೂರು ಗ್ರಾಮ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಮೃತ ಹನುಮಮ್ಮ ನನ್ನ ಚಿಕ್ಕಮ. ಚಾಸಾ.2 ರಿಂದ 7 ರವರ ಪರಿಚಯವಿದೆ. ಆರೋಪಿ ನನ್ನ ಅಳಿಯ. ಈಗ್ಗೆ ಸುಮಾರು 7-8 ತಿಂಗಳ ಹಿಂದೆ ಕೊಕ್ಕನೂರು ಗ್ರಾಮದ ಜಮೀನಿನಲ್ಲಿ ಕೆಲಸ ಮಾಡುತ್ತಿರಬೇಕಾದರೆ ಮೃತ ಹನುಮಮ್ಮನವರು 1 ನೇ ಆರೋಪಿಯ ಬೈಕ್ ಮೇಲೆ ಹತ್ತುತ್ತಿರುವಾಗ ತಲೆ ತಿರುಗಿ ಕೆಳಗೆ ಬಿದ್ದು ತಲೆಗೆ ಪೆಟ್ಟಾಗಿರುತ್ತದೆ. ಆಗ ನಾನು ಅವರನ್ನು ಮಲೆಬೆನ್ನೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋದೆನು. ಮಲೆಬೆನ್ನೂರು ಆಸ್ಪತ್ರೆಯಲ್ಲಿ ದಾವಣಗೆರೆಗೆ ಕರೆದುಕೊಂಡು ಹೋಗಲು ತಿಳಿಸಿದರು. ನಂತರ ದಾವಣಗೆರೆ ಸಿಜೆ ಆಸ್ಪತ್ರೆಯಲ್ಲಿ ಅಲ್ಲಿನ ವೈದ್ಯರು ಹನುಮಮ್ಮ ತೀರಿಕೊಂಡಿರುತ್ತಾರೆ ಎಂದು ತಿಳಿಸಿದರು. ಅದೇ ದಿನ ಸಂಜೆ 6.00 ಗಂಟೆಗೆ ಠಾಣೆಗೆ ಹೋಗಿ ದೂರು ನೀಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದೂರನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. 1 ವಾರದ ನಂತರ ಪೊಲೀಸರು ಸ್ಥಳಕ್ಕೆ ಬಂದು ಪಂಚನಾಮೆಯನ್ನು ಜರುಗಿಸಿದರು. ಸಾಕ್ಷಿಯು ಗುರುತಿಸಿದ ಸ್ಥಳ ಪಂಚನಾಮೆಯನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಕಚ್ಚಾ ನಕಾಶೆಯನ್ನು ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು. ಸದರಿ ಸಂದರ್ಭದಲ್ಲಿ ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ನಿಪಿ. 4 ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯನ್ನು ಸಂಜೆ 4.00 ಗಂಟೆಗೆ ಜರುಗಿಸಿರುತ್ತಾರೆ. ಆರೋಪಿ ಈ ದಿನ ನ್ಯಾಯಾಲಯದಲ್ಲಿ ಇದ್ದಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ಮೃತ ಹನುಮಮ್ಮ ನವರಿಗೆ ವಯಸ್ಸಾಗಿದ್ದು ಕೈಕಾಲು ನಡುಕ ಮತ್ತು ಅನಾರೋಗ್ಯ ಇರುವುದು ಗೊತ್ತಿದ್ದರೂ ಸಹ ಹಾಗೂ ಬೈಕನಲ್ಲಿ ಕುಳಿತುಕೊಳ್ಳುವಷ್ಟು ಶಕ್ತಿ ಇಲ್ಲದೇ ಇದ್ದರೂ ಸಹ ಅವರನ್ನು ಆರೋಪಿ ಕೆಎ/17 ಹೆಚ್ ಎಂ 8248 ಬೈಕನಲ್ಲಿ ಕೂರಿಸಿಕೊಂಡು ನಿರ್ಲಕ್ಷ್ಯತನದಿಂದ ಅಡಿಕೆ ಹೊಲದಲ್ಲಿ ಚಾಲನೆ ಮಾಡಿಕೊಂಡು ಬಂದು ಬದುವನ್ನು ಹತ್ತಿಸಿದ್ದರಿಂದ ಅಪಘಾತ ಸಂಭವಿಸಿರುತ್ತದೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ ಬಿ ಸಿ ವಕೀಲರಿಂದಃ**

ಅಪಘಾತ ಹೇಗೆ ಆಗಿರುತ್ತದೆ ಎಂದು ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಆರೋಪಿ ಅಂಜಿನಪ್ಪ ಮೃತ ಹನುಮಮ್ಮನವರನ್ನು ಬೈಕ್ ಮೇಲೆ ಕೂರಿಸಿಕೊಂಡು ಹೋಗಿದ್ದನ್ನು ನಾನು ನೋಡಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಾನು ಹೋದಾಗ ಜನ ಸೇರಿದ್ದರು ಎಂದು ನುಡಿಯುತ್ತಾರೆ. ಅಪಘಾತ ಆರೋಪಿ ತಪ್ಪಿನಿಂದ ಸಂಭವಿಸಿಲ್ಲ ಎಂದರೆ ಸರಿ. ಅಪಘಾತವಾದ ನಂತರ ನಾನು ಸ್ಥಳಕ್ಕೆ ಹೋಗಿರುತ್ತೇನೆ. ನಿಪಿ.1 ದೂರನ್ನು ನಾನು ಬರೆದಿಲ್ಲ ಎಂದರೆ ಸರಿ. ನಿಪಿ.1 ನ್ನು ಪೊಲೀಸರು ಬೆರಳಚ್ಚು ಪಡಿಸಿದ್ದು ಅವರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ